# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 168 (202)
2. ಸದಸ್ಯರ ಹೆಸರು : ಶ್ರೀ ಐವನ್ ಡಿ ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 12.08.2025
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಗಳೂರು ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆಯ ಕಾಮಗಾರಿಯು ಪ್ರಾರಂಭಗೊಳ್ಳದೇ ಇರಲು ಕಾರಣವೇನು: ಇದಕ್ಕೆ ಬೇಕಾದ ಸ್ಥಳ ಸ್ವಾಧೀನಪಡಿಸಿಕೊಳ್ಳಲಾಗಿದೆಯೇ: | ಮಂಗಳೂರು ವಿಮಾನ ನಿಲ್ದಾಣದ ರನ್ ವೇ ಬೇಸಿಕ್ ಸ್ಟ್ರಿಪ್ ಮತ್ತು RESA ವಿಸ್ತರಣೆಗಾಗಿ ಸುಮಾರು 36 ಎಕರೆ ಭೂಸ್ವಾಧೀನ ಪಡಿಸಿಕೊಳ್ಳಲು ಜಿಲ್ಲಾಡಳಿತವು ಅಂದಾಜು ಪಟ್ಟಿಯನ್ನು ಸಿದ್ದಪಡಿಸಿ, ಈ ವಿಮಾನ ನಿಲ್ದಾಣಕ್ಕೆ ಅವಶ್ಯವಿರುವ ಜಮೀನುಗಳ ಭೂಸ್ವಾಧೀನ ವೆಚ್ಚ ಮತ್ತು ಕಾಮಗಾರಿಯನ್ನು ಕೈಗೊಳ್ಳಲು AAI ಸಂಸ್ಥೆಯನ್ನು ಕೋರಲಾಗಿದೆ. |
| (ಆ) | ಮಂಗಳೂರು ವಿಮಾನ ನಿಲ್ದಾಣದ ವಿಸ್ತರಣೆ ಎಷ್ಟು ಮೀಟರ್ ವಿಸ್ತರಿಸಲು ಯೋಜನೆ ಇದೆ: ಹಾಗೂ ಬೇಕಾದ ಸ್ಥಳ ಎಷ್ಟು; (ವಿವರ ನೀಡುವುದು) | ಮಂಗಳೂರು ವಿಮಾನ ನಿಲ್ದಾಣದ ರನ್ ವೇಯ ಬೇಸಿಕ್ ಸ್ಟ್ರಿಪ್ ಮತ್ತು RESA ವಿಸ್ತರಿಸಲು 36 ಎಕರೆ ಜಮೀನು ಅವಶ್ಯವಿರುತ್ತದೆ. |
| (ಇ) | ಮಂಗಳೂರು ವಿಮಾನ ನಿಲ್ದಾಣದಲ್ಲಿ ರನ್‌ವೇಯ ಕೊರತೆಯಿಂದ ದೊಡ್ಡ ವಿಮಾನಗಳು ಮಂಗಳೂರಿಗೆ ಬರಲು ಹಿಂಜರಿಯುತ್ತಿದ್ದು, ಸುರಕ್ಷತೆ ದೃಷ್ಟಿಯಿಂದ ಮಂಗಳೂರು ವಿಮಾನ ನಿಲ್ದಾಣವು ಅಪಾಯಕಾರಿ ಆಗಿದೆ ಹಾಗೂ ವಿಮಾನ ನಿಲ್ದಾಣದಲ್ಲಿ ಇಳಿಯಲು ಮತ್ತು ಹಾರಾಟ ನಡೆಸಲು ಸಾಧ್ಯವಿಲ್ಲ ಎಂದು ಪತ್ರಿಕೆಗಳಲ್ಲಿ ಪ್ರಕಟವಾಗಿರುವುದು ನಿಜವೇ; (ವಿವರ ನೀಡುವುದು) | ಈ ಕುರಿತು ಸರ್ಕಾರದಲ್ಲಿ ಯಾವುದೇ ಮಾಹಿತಿ ಇರುವುದಿಲ್ಲ. |
| (ಈ) | ಕೇಂದ್ರ ಸರ್ಕಾರವು ವಿಮಾನ ನಿಲ್ದಾಣ ಅಭಿವೃದ್ಧಿಗೆ ಹಣ ಬಿಡುಗಡೆ ಮಾಡದೇ ಕೇವಲ ಖಾಸಗಿಯವರಿಗೆ ವಿಮಾನ ನಿಲ್ದಾಣ ಗುತ್ತಿಗೆ ನೀಡಿ ಆದಾಯ ಮಾತ್ರ ವಸೂಲು ಮಾಡುತ್ತಿದೆ ಎಂದು ಹೇಳುತ್ತಿರುವುದು ಹಾಗೂ ವಿಮಾನ ನಿಲ್ದಾಣ ಅಭಿವೃದ್ಧಿಗೆ ರಾಜ್ಯ ಸರ್ಕಾರದ ಪತ್ರವೇನು? (ವಿವರ ನೀಡುವುದು) | ಮಂಗಳೂರು ವಿಮಾನ ನಿಲ್ದಾಣದ ಕಾರ್ಯಚರಣೆ ಮತ್ತು ನಿರ್ವಹಣೆಯನ್ನು AAI ಸಂಸ್ಥೆಯ ಮೂಲಕ PPP ಆಧಾರದ ಮೇಲೆ ಖಾಸಗಿ ಸಂಸ್ಥೆಗೆ ವಹಿಸಿರುತ್ತದೆ. ಈ ವಿಮಾನ ನಿಲ್ದಾಣವು AAI ಕಾರ್ಯ ವ್ಯಾಪ್ತಿಗೆ ಒಳಪಡುವುದರಿಂದ ರಾಜ್ಯ ಸರ್ಕಾರದ ಯಾವುದೇ ಪಾತ್ರವಿರುವುದಿಲ್ಲ. |

ಸಂಖ್ಯೆ:ಮೂಅಇ 169 ರಾಅವಿ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು